# ಮಂಗಳೂರು ವಿವಿಯಲ್ಲಿ 'ಪ್ರಥಮ ಚಿಕಿತ್ಸಾ ಮಾಹಿತಿ ಕಾರ್ಯಾಗಾರ'



ಕೊಣಾಜೆ, ಮೇ 17: ಯಾವುದೇ ಅವಘಡ, ಅಪಘಾತ ಸಂಭವಿಸಿದ ತಕ್ಷಣ ಫೋಟೊ ವೀಡಿಯೊ ತೆಗೆಯುವ ಬದಲು ಗಾಯಾಳುಗಳಿಗೆ ಮಾನವೀಯತೆಯೊಂದಿಗೆ ಪ್ರಥಮ ಚಿಕಿತ್ಸೆ ನೀಡಿ ಬದುಕಿಸುವ ಪ್ರಯತ್ನ ನಮ್ಮದಾಗಬೇಕು. ಯುವ ಸಮುದಾಯ, ವಿದ್ಯಾರ್ಥಿಗಳು ಇಂತಹ ಪ್ರಥಮ ಚಿಕಿತ್ಸೆ ಮಾಹಿತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅರಿವನ್ನು ಹೆಚ್ಚಿಸುವುದರೊಂದಿಗೆ ಹಳ್ಳಿಯ ಜನತೆಗೂ ಈ ಕುರಿತು ಮಾಹಿತಿ ಒದಗಿಸುವ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಬಹುದು ಎಂದು ಮಂಗಳೂರು ವಿವಿ ಕುಲಪತಿ ಪ್ರೊ.ಪಿ.ಎಲ್. ಧರ್ಮ ಹೇಳಿದ್ದಾರೆ.

ಮಂಗಳೂರು ವಿವಿಯ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ ಹಾಗೂ ವಿದ್ಯಾರ್ಥಿ ಪರಿಷತ್ ವತಿಯಿಂದ ಬುಧವಾರ ಮಂಗಳ ಸಭಾಂಗಣದಲ್ಲಿ ನಡೆದ ಪ್ರಥಮ ಚಿಕಿತ್ಸಾ ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಪನ್ಮೂಲ ವ್ಯಕ್ತಿಯಾಗಿದ್ದ ನಿಟ್ಟೆ ಕ್ಷೇಮಾ ಆಸ್ಪತ್ರೆಯ ವೈದ್ಯ ಪ್ರೊ.ಶ್ರೀಪಾದ ಜಿ. ಮಾತನಾಡಿದರು. ಇದೇ ಸಂದರ್ಭ ಬೀದಿನಾಯಿಗಳ ಹಾಗೂ ಪ್ರಾಣಿ ಸಂರಕ್ಷಕಿ ರಜನಿ ದಾಮೋದರ ಶೆಟ್ಟಿಯನ್ನು ಸನ್ಮಾನಿಸಿ ಗೌರವಿಸಲಾಯಿತು.

ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿ ಕ್ಷೇಮಪಾಲನಾ ವಿಭಾಗದ ನಿರ್ದೇಶಕ ಪ್ರೊ.ಪ್ರಶಾಂತ್ ನಾಯ್ಕ್ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ರಕ್ಷಿತ್ ಕಾರ್ಯಕ್ರಮ ನಿರೂಪಿಸಿದರು.